ಕರ್ನಾಟಕ ಸರ್ಕಾರ – ಅರಣ್ಯ ಇಲಾಖೆ

**ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಮುಖ್ಯಸ್ಥರು, ಅರಣ್ಯ ಪಡೆ) ಹಾಗೂ ಆಯ್ಕೆ ಪ್ರಾಧಿಕಾರ ಇವರ ಕಛೇರಿ, ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು–560003**

# ಪ್ರಕಟಣೆ

**ಅಧಿಸೂಚನೆ ಸಂಖ್ಯೆ: ಬಿ9–ವಲಅ–ವಿವ–5/2015–16, ದಿನಾಂಕ: 22.03.2016**

## 72 ವಲಯ ಅರಣ್ಯಾಧಿಕಾರಿ ಹುದ್ದೆಗಳಿಗೆ ನೇರ ನೇಮಕಾತಿ

* * * * *

72 ವಲಯ ಅರಣ್ಯಾಧಿಕಾರಿ ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಂಬಂಧ ವಲಯ ಅರಣ್ಯಾಧಿಕಾರಿ ಹುದ್ದೆಯ ಪೂರ್ವಭಾವಿ ಪರೀಕ್ಷೆಗಳು ಮತ್ತು ಮುಖ್ಯ ಪರೀಕ್ಷೆಗಳಲ್ಲಿ ಅಭ್ಯರ್ಥಿಗಳು ಗಳಿಸಿದ ಒಟ್ಟು ಅಂಕಗಳ ಮೆರಿಟ್ ಆಧಾರದ ಮೇಲೆ ಹಾಗೂ ಪ್ರಸ್ತುತ ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳ ಅನುಸಾರ ಹಾಗೂ ಪ್ರಸ್ತುತ ಚಾಲ್ತಿಯಲ್ಲಿರುವ ಹೈದರಾಬಾದ್ – ಕರ್ನಾಟಕ ಮೀಸಲಾತಿ ನಿಯಮಗಳ ಅನುಸಾರ ಮತ್ತು ನೋಟಿಫೈ ಮಾಡಿರುವ ಹುದ್ದೆಗಳ ಸಂಖ್ಯೆಗೆ ಅನುಸಾರ ವೃಂದ ಮತ್ತು ನೇಮಕಾತಿ ನಿಯಮದಂತೆ ಮೂಲ ದಾಖಲೆಗಳ ಪರಿಶೀಲನೆ, ವೈದ್ಯಕೀಯ ಪರೀಕ್ಷೆ ಹಾಗೂ ದೈಹಿಕ ತಾಳ್ವಿಕೆ ಪರೀಕ್ಷೆ (ಕಾಲ್ನಡಿಗೆ ಪರೀಕ್ಷೆ) ಗೆ 1:2 (ಹುದ್ದೆ:ಅಭ್ಯರ್ಥಿ) ಅನುಪಾತದಲ್ಲಿ ಅರ್ಹ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ದಿನಾಂಕ: 30.01.2017 ರಂದು ಪ್ರಕಟಿಸಲಾಗಿದೆ. ಈ ತಾತ್ಕಾಲಿಕ ಪಟ್ಟಿ ಕುರಿತು ಆಕ್ಷೇಪಣೆಗಳಿದ್ದಲ್ಲಿ ಈ ಕಛೇರಿಗೆ ದಿನಾಂಕ: 06.02.2017 ರೊಳಗೆ ಸಲ್ಲಿಸಲು ತಿಳಿಸಲಾಗಿರುತ್ತದೆ.

ಈವರೆಗೆ 1:2 (ಹುದ್ದೆ:ಅಭ್ಯರ್ಥಿ) ತಾತ್ಕಾಲಿಕ ಪಟ್ಟಿಯ ಕುರಿತು ಯಾವುದೇ ಆಕ್ಷೇಪಣೆಗಳನ್ನು ಸ್ವೀಕರಿಸಲಾಗಿರುವುದಿಲ್ಲ. ಹೀಗಾಗಿ, ದಿನಾಂಕ: 30.01.2017 ರಂದು ಪ್ರಕಟಗೊಂಡಿರುವ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನೇ 1:2 (ಹುದ್ದೆ:ಅಭ್ಯರ್ಥಿ) ಅಂತಿಮ ಪಟ್ಟಿ ಎಂದು ಓದಿಕೊಳ್ಳುವುದು. ಈ ಆಯ್ಕೆ ಪಟ್ಟಿಯಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ. ಈ ಆಯ್ಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳು **ದಿನಾಂಕ: 20.02.2017** ರಿಂದ ಮೂಲ ದಾಖಲೆಗಳ ಪರಿಶೀಲನೆ, ವೈದ್ಯಕೀಯ ಪರೀಕ್ಷೆ ಹಾಗೂ ದೈಹಿಕ ತಾಳ್ವಿಕೆ ಪರೀಕ್ಷೆ (ಕಾಲ್ನಡಿಗೆ ಪರೀಕ್ಷೆ) ಗೆ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಧಾರವಾಡ ವೃತ್ತ, ಧಾರವಾಡ ಇವರ ಸಮ್ಮುಖ ಹಾಜರಾಗತಕ್ಕದ್ದು. ಗೈರು ಹಾಜರಾಗುವ ಅಭ್ಯರ್ಥಿಗಳನ್ನು ನೇಮಕಾತಿ ಪ್ರಕ್ರಿಯೆಯಿಂದ ಕೈಬಿಡಲಾಗುವುದು.

ಬೆಂಗಳೂರು
ದಿನಾಂಕ: 07–02–2017

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಮುಖ್ಯಸ್ಥರು, ಅರಣ್ಯ ಪಡೆ)